# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | | **474 (521)** |
| **ಸದಸ್ಯರ ಹೆಸರು** | | **ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | | **21.02.2022** |
| **ಉತ್ತರಿಸಬೇಕಾದವರು** | | **ಉನ್ನತ ಶಿಕ್ಷಣ ಸಚಿವರು** |
| **ಪ್ರಶ್ನೆ** | | **ಉತ್ತರ** |
| (ಅ) | ಪದವಿ ಪೂರ್ವ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರು ಯು.ಜಿ.ಸಿ. ಶೈಕ್ಷಣಿಕ ವಿದ್ಯಾರ್ಹತೆಯನ್ನು ಪಡೆದುಕೊಂಡಿರುವವರಿಗೆ ಉನ್ನತ ಶಿಕ್ಷಣ ಇಲಾಖೆಯಲ್ಲಿ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯಲ್ಲಿ ಶೇ. 5% ಮೀಸಲಾತಿ ನೀಡಲು ಸರ್ಕಾರ ಚಿಂತಿಸುವುದೇ; | ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| (ಆ) | ಉನ್ನತ ಶಿಕ್ಷಣ ಇಲಾಖೆಯಲ್ಲಿ ಅಧ್ಯಾಪಕೇತರರಿಗೆ ಶೇ. 5% ಮೀಸಲಾತಿ ನಿಗದಿಗೊಳಿಸಿರುವಂತೆ ಯು.ಜಿ.ಸಿ. ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ ಪಿ.ಯು. ಉಪನ್ಯಾಸಕರಿಗೂ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಶೇ. 5% ಮೀಸಲಾತಿ ನಿಗದಿಪಡಿಸಲು ಸರ್ಕಾರಕ್ಕಿರುವ ತೊಂದರೆಗಳೇನು; | ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 91 ಡಿಸಿಇ 2004, ದಿನಾಂಕ:25.09.2009 ರಲ್ಲಿ ಪ್ರಕಟಿಸಲಾಗಿದ್ದು, ಈ ಕೆಳಕಂಡಂತೆ ಆದೇಶಿಸಲಾಗಿದೆ.<br>Ninety-five percent by direct recruitment and five percent shall be filled by recruitment of persons in the Group-C Cadres who have completed the period of probation in the Department of Collegiate Education.<br>ಅದರಂತೆ, ಮೇಲ್ಕಂಡ ನಿಯಮಗಳನ್ವಯ ಯು.ಜಿ.ಸಿ. ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ ಪದವಿ ಪೂರ್ವ ಉಪನ್ಯಾಸಕರಿಗೆ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಶೇ.5 ರಷ್ಟು ಮೀಸಲಾತಿ ನೀಡಲು ಅವಕಾಶವಿರುವುದಿಲ್ಲ.<br>ಯು.ಜಿ.ಸಿ. ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ ಪದವಿ ಪೂರ್ವ ಉಪನ್ಯಾಸಕರು ನೇರ ನೇಮಕಾತಿ ನಿಯಮಾವಳಿಗಳಂತೆ ಮುಕ್ತ ಸ್ಪರ್ಧೆಯ ಮೂಲಕ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅರ್ಜಿ ಸಲ್ಲಿಸಿ, ಆಯ್ಕೆ ಹೊಂದಲು ಅವಕಾಶವಿರುತ್ತದೆ. |

| | | |
|---|---|---|
| (ಇ) | ಯಾವ ಕಾಲಮಿತಿಯಲ್ಲಿ ಮೀಸಲಾತಿ ನಿಗದಿಪಡಿಸಲಾಗುವುದು? | ಉದ್ಭವಿಸುವುದಿಲ್ಲ. |

**ಇಡಿ 58 ಡಿಸಿಇ 2022**

**(ಡಾ. ಅಶ್ವಥ್ ನಾರಾಯಣ ಸಿ.ಎನ್.)**
**ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು**